ಸಾಕ್ಷಿಯನ್ನು ದಿನಾಂಕ 06.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ವಾದಿಗಳ ಪರ ವಕೀಲರಾದ ಶ್ರೀ ಸಿ.ಪಿ.ಟಿರವರಿಂದ:-**

1. ನಾನು ಈ ದಾವೆಯಲ್ಲಿ 1ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ, ಅರ್ಥೈಸಿಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನನ್ನ ವಕೀಲರು ಸಿದ್ದಪಡಿಸಿದ್ದಾರೆ.

2. ಜಮಾಬಂಧಿಯ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿ.ಪಿ 1 ಎಂದು, ಋಣಭಾರ ರಾಹಿತ್ಯ ಪ್ರಮಾಣಪತ್ರಗಳನ್ನು ನಿ.ಪಿ 2 ಮತ್ತು 3 ಎಂದು, ದಿನಾಂಕ 15.07.1991 ರ ಕ್ರಯಪತ್ರದ ದೃಢೀಕೃತ ನಕಲನ್ನು ನಿ.ಪಿ 4 ಎಂದು, ಪಹಣಿ ಪತ್ರಿಕೆಗಳನ್ನು ನಿ.ಪಿ 5 ರಿಂದ 7 ಎಂದು, ಮುಟೇಷನ್ ರಿಜಿಸ್ಟರ್ ನ ಪ್ರತಿಯನ್ನು ನಿ.ಪಿ 8 ಎಂದು ಗುರುತಿಸಲಾಯಿತು.

ಪಾಟೀ ಸವಾಲಿಗಾಗಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.